# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಮೂರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:15ನೇ ಜುಲೈ, 2024**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಸಂತಾಪ ಸೂಚನೆಗಳು

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 03. ಶೂನ್ಯವೇಳೆ ಪ್ರಸ್ತಾವಗಳು

### 04. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

### 05. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

## 06. ಪರಿಶೀಲನಾ ಸಮಿತಿಯ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

**ಶ್ರೀ ಕೆ.ಎನ್. ರಾಜಣ್ಣ (ಅಧ್ಯಕ್ಷರು, ಪರಿಶೀಲನಾ ಸಮಿತಿ ಹಾಗೂ ಮಾನ್ಯ ಸಹಕಾರ ಸಚಿವರು) ಅವರು:-**

"ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಹಾಗೂ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:19.06.2024ರಿಂದ 02 ತಿಂಗಳುಗಳ ಕಾಲಾವಕಾಶವನ್ನು ಸದನದ ಸಹಮತಿ ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸುವುದು".

## 07. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅವಧಿ ಪೂರ್ವಕ್ಕೂ ಮುನ್ನ ಜನಿಸಿದ ಮಕ್ಕಳಲ್ಲಿ ರಕ್ತದ ಕೊರತೆ ಹಾಗೂ ಅಪೌಷ್ಠಿಕತೆಯಿಂದ ಬಳಲುತ್ತಿರುವ ಸಮಸ್ಯೆಯು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಗರ್ಭಿಣಿಯರಿಗೆ ಪೌಷ್ಠಿಕ ಆಹಾರ ಹಾಗೂ ಸೂಕ್ತ ವೈದ್ಯಕೀಯ ನೆರವು ನೀಡುವ ಕುರಿತು ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ದಿನಾಂಕ:15.05.2024ರಂದು ಹುಬ್ಬಳ್ಳಿ ನಗರದಲ್ಲಿ ಹತ್ಯೆಯಾದ ಅಂಜಲಿ ಮೋಹನ ಅಂಬಿಗ ಇವರ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತರ ಕುಟುಂಬಕ್ಕೆ ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿರುವ ಹಾಗೂ ರಾಜ್ಯದಲ್ಲಿ ಕೊಲೆ ಹತ್ಯೆ ಪ್ರಕರಣದಲ್ಲಿ ಭಾಗಿಯಾದವರನ್ನು ನಿಷ್ಪಕ್ಷಪಾತ ತನಿಖೆಗೆ ಒಳಪಡಿಸಿ ಫಾಸ್ಟ್ ಟ್ರ್ಯಾಕ್ ಕೋರ್ಟ್ ಮುಖಾಂತರ ಅತೀ ಶೀಘ್ರದಲ್ಲಿ ಶಿಕ್ಷೆಯಾಗುವಂತೆ ಮಾಡುವ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

೦3. **ಶ್ರೀ ಅಡಗೂರ್ ಹೆಚ್. ವಿಶ್ವನಾಥ್** ಅವರು ಕಾವೇರಿ ನದಿ ನೀರಿನ ನ್ಯಾಯ ಮಂಡಳಿ ತೀರ್ಪಿನಿಂದ ಕರ್ನಾಟಕದ ಕಾವೇರಿ ಕೊಳ್ಳದ ಎಂಟು ಜಿಲ್ಲೆಗಳಲ್ಲಿ ಆಗಿರುವ/ಆಗುತ್ತಿರುವ ನೀರಿನ ಸಮಸ್ಯೆ, ಅನಾಹುತ ಹಾಗೂ ದುಸ್ಥಿತಿಗಳ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

## 08. ನಿಯಮ 330ರ ಮೇರೆಗೆ

೦1. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ರಾಜ್ಯದ ಇತರೆ ಭಾಗಗಳಿಂದ ಕರಾವಳಿಗೆ ಸಂಪರ್ಕ ಕೊಂಡಿಯಾಗಿರುವ ಘಾಟಿ ಪರಿಸರದಲ್ಲಿ ಬರುವ ಹೆದ್ದಾರಿಯಲ್ಲಿ ಹೆಚ್ಚು ಮಳೆಯಿಂದಾಗಿ ರಸ್ತೆ ಕುಸಿತದಿಂದ ಸಂಚಾರ ವ್ಯತ್ಯಯ ಉಂಟಾಗುತ್ತಿರುವುದನ್ನು ತಪ್ಪಿಸಲು ಶಾಶ್ವತ ಮತ್ತು ದೀರ್ಘಕಾಲಿಕ ಉಪಯೋಗದ ಯೋಜನೆಯನ್ನು ಸರ್ಕಾರ ರೂಪಿಸದಿರುವ ಕುರಿತು ಪ್ರಸ್ತಾಪಿಸುವುದು.

..3..

೦೨. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ಭೂರಹಿತರಿಗೆ ಹಾಗೂ ಬಡರೈತರಿಗೆ ಸರ್ಕಾರ ನೀಡಿರುವ ಭೂಮಿಗೆ ಪಹಣಿಯಲ್ಲಿ ಪಿ.ನಂ. ನಮೂದಿಸದಿರುವುದರಿಂದ ಹಾಗೂ ಸದರಿ ಭೂಮಿಯನ್ನು ಇತರರಿಗೆ ಪರಭಾರೆ ಮಾಡಲು ವಿಧಿಸಿರುವ ನಿರ್ಬಂಧವನ್ನು ಸಡಿಲಿಸದೆ ಇರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

೦೩. **ಶ್ರೀ ಎನ್. ರವಿಕುಮಾರ್** ಅವರು ದೇವಸ್ಥಾನಗಳ ಉಂಬಳಿ ಭೂಮಿಯನ್ನು ಭೂ ಸುಧಾರಣಾ ಕಾಯ್ದೆ ಅನ್ವಯ ಪಡೆದುಕೊಂಡು ಕೃಷಿ ಚಟುವಟಿಕೆ ನಡೆಸದೆ ಭೂ ಪರಿವರ್ತನೆ ಮಾಡಿ ಮಾರಾಟ ಮಾಡುತ್ತಿರುವುದರಿಂದ ದೇವಸ್ಥಾನಗಳ ಸಮೀಪದಲ್ಲಿ ಅಕ್ರಮ ಕಟ್ಟಡಗಳನ್ನು ನಿರ್ಮಿಸಿರುವ ಕಾರಣ ಗಲಭೆಗಳು ಉಂಟಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**